# **ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ನಡವಳಿ**

**ವಿಷಯ**: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ರಾಜ್ಯದ 5602 ಗ್ರಾಮ ಪಂಚಾಯತಿ ಗ್ರಂಥಾಲಯಗಳ ಮೇಲ್ವಿಚಾರಕರುಗಳ 2022-23ನೇ ಸಾಲಿನ ಮೊದಲನೇ ತ್ರೈಮಾಸಿಕ ಏಪ್ರಿಲ್-2022 ಮಾಹೆಯ ಗೌರವ ಸಂಭಾವನೆ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ**:
1. ಸರ್ಕಾರದ ಆದೇಶ ಸಂಖ್ಯೆ: ಇಡಿ64 ಎಲ್‌ಐಬಿ 2015, ದಿ: 26-02-2019.
2. ಸರ್ಕಾರದ ಆದೇಶ ಸಂಖ್ಯೆ: ಇಡಿ64 ಎಲ್‌ಐಬಿ 2015, ದಿ: 24-07-2019.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/469/ಗ್ರಾಪಂಅ/2020 ಭಾಗ-3, ಬೆಂಗಳೂರು, ದಿನಾಂಕ:24.11.2021
4. ಸರ್ಕಾರ ಆದೇಶ ಸಂಖ್ಯೆ: ಆರ್‌ಡಿಪಿಆರ್/89/ಜಿಪಿಎ/2021,ಬೆಂಗಳೂರು, ದಿನಾಂಕ: 14.02.2022.
5. ಸರ್ಕಾರ ಆದೇಶ ಸಂಖ್ಯೆ:ಕೆಪಿಆರ್‌ಸಿ/ಡಿಇವಿ/532/2021, ಬೆಂಗಳೂರು, ದಿನಾಂಕ: 01.04.2022.
6. ಸರ್ಕಾರದ ಆದೇಶ ಸಂಖ್ಯೆ:ಎಫ್ ಡಿ/ಟಿಎಫ್‌ಪಿ/2022, ದಿನಾಂಕ:04.04.2022.
7. ಸರ್ಕಾರದ ಆದೇಶ:ಗ್ರಾಅಪ/03/ಎಎಫ್‌ಎನ್/2022,ಬೆಂಗಳೂರು, ದಿನಾಂಕ: 06.04.2022.
8. ಗ್ರಾಮ ಪಂಚಾಯಿತಿ ಮೇಲ್ವಿಚಾರಕರಿಗೆ 05 ದಿನಗಳ ಗ್ರಂಥಾಲಯ ಕಂಪ್ಯೂಟರ್ ಹಾಗೂ ಗ್ರಂಥಾಲಯ ನಿರ್ವಹಣಾ ತರಬೇತಿ ಕುರಿತು, ದಿನಾಂಕ:06.04.2022ರ ಸಭೆಯ ನಡವಳಿಯಂತೆ.
9. ಸರ್ಕಾರದ ಆದೇಶ ಸಂಖ್ಯೆ:ಕೆಪಿಆರ್‌ಸಿ-ಕವಿ/4/2022, ಬೆಂಗಳೂರು ದಿನಾಂಕ: 23.05.2022.

***

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1) ಮತ್ತು (2)ರ ಸರ್ಕಾರದ ಆದೇಶದಲ್ಲಿ ರಾಜ್ಯದಲ್ಲಿನ 5633 ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯಿತಿಗಳಿಗೆ ವರ್ಗಾಯಿಸಲಾಗಿರುತ್ತದೆ.

ಓದಲಾದ ಕ್ರಮ ಸಂಖ್ಯೆ(9)ರಲ್ಲಿ ಸರ್ಕಾರದ ದಿನಾಂಕ:23.05.2022ರ ಆದೇಶದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಯೋಜನೆಯಾದ **"ಗ್ರಾಮ ಪಂಚಾಯಿತಿ ಗ್ರಂಥಾಲಯಗಳಿಗೆ ಅನುದಾನ"** ಲೆಕ್ಕ ಶೀರ್ಷಿಕೆ: **2205-00-198-1-02-300ರಡಿ** ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ವರ್ಗಾವಣೆ ಮಾಡಲಾಗಿದ್ದು, ಸದರಿ ಲೆಕ್ಕ ಶೀರ್ಷಿಕೆಯ ನಿರ್ವಹಣೆಗೆ ನಿರ್ದೇಶಕರು (ಅಭಿವೃದ್ಧಿ) ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು, ಇವರನ್ನು ಹಣ ಸೆಳೆಯುವ ಅಧಿಕಾರಿಯನ್ನಾಗಿ (ಡಿ.ಡಿ.ಓ) ಹಾಗೂ ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು, ಇವರನ್ನು ಮೇಲುರುಜು ಅಧಿಕಾರಿಯನ್ನಾಗಿ ಮತ್ತು ವೇತನ ಹಾಗೂ ಬಟವಾಡೆ (ಡಿ.ಡಿ.ಓ) ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

2022-23ನೇ ಸಾಲಿನ ಆಯವ್ಯಯದಲ್ಲಿ **"ಗ್ರಾಮ ಪಂಚಾಯಿತಿಗಳ ಗ್ರಂಥಾಲಯಗಳಿಗೆ ಅನುದಾನ" ಯೋಜನೆಯ ಲೆಕ್ಕ ಶೀರ್ಷಿಕೆ: 2205-00-198-1-02-300**ರಡಿ ಒಟ್ಟು **ರೂ. 80,98,00,000/-ಗಳು ನಿಗಧಿಪಡಿಸಲಾಗಿದೆ (ಎಂಭತ್ತು ಕೋಟಿ ತೊಂಭತ್ತೆಂಟು ಲಕ್ಷ ರೂಪಾಯಿ ಮಾತ್ರ)** ಗಳನ್ನು ನಿಗಧಿಪಡಿಸಿ ಒದಗಿಸಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ(6)ರ ಸರ್ಕಾರದ ಆರ್ಥಿಕ ಇಲಾಖೆಯ ಪ್ರತ್ಯಾಯೋಜನೆ ಆದೇಶದಂತೆ ಆಯವ್ಯಯದಲ್ಲಿ ಮೊದಲನೇ ಮತ್ತು ಎರಡನೇ ಕಂತಿನ ಅನುದಾನ ಬಿಡುಗಡೆಗೆ ಕಲ್ಪಿಸಲಾಗಿರುತ್ತದೆ.

2022-23ನೇ ಸಾಲಿನಲ್ಲಿ 5616 ಗ್ರಂಥಾಲಯಗಳ ಪೈಕಿ ಮೇಲೆ ಓದಲಾದ ಕ್ರಮ ಸಂಖ್ಯೆ(5)ರ ಸರ್ಕಾರದ ಆದೇಶದನ್ವಯ ಒಟ್ಟು 14 ಗ್ರಂಥಾಲಯಗಳು ಪುರಸಭೆ, ನಗರಸಭೆಗಳಿಗೆ ಪರಿವರ್ತಿಸಲಾಗಿರುವುದರಿಂದ ಇವುಗಳನ್ನು ಕೈಬಿಡಲಾಗಿದೆ. ಇನ್ನುಳಿದ 5602 ಗ್ರಂಥಾಲಯಗಳಿಗೆ ಮಾಸಿಕ ಗೌರವಧನ **ತಲಾ ರೂ.12,000/-ಗಳಂತೆ ಏಪ್ರಿಲ್-2022 ಮಾಹೆಯ ಅನುದಾನ ಒಟ್ಟು ರೂ.6,72,24,000/-**ಗಳು, ಸದರಿ ಅನುದಾನವನ್ನು ಖಜಾನೆ-2ರ ಮುಖಾಂತರ ಪ್ರಸ್ತುತ ಗ್ರಾಮ ಪಂಚಾಯಿತಿಗಳಲ್ಲಿ ನಿರ್ವಹಿಸಲ್ಪಡುತ್ತಿರುವ "ಗ್ರಾಮ ಪಂಚಾಯಿತಿ ಶಾಸನಬದ್ಧ ಅನುದಾನ" ಬ್ಯಾಂಕ್ ಖಾತೆಗಳಿಗೆ ಬಿಡುಗಡೆಗೊಳಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ,

**ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಆದೇಶ ಸಂಖ್ಯೆ: ಕಪಂರಾಆ/ ಅಭಿವೃದ್ಧಿ/117/2022,ಬೆಂಗಳೂರು, ದಿನಾಂಕ: 21.06.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲಿನ ಗ್ರಾಮ ಪಂಚಾಯಿತಿಗಳಲ್ಲಿನ ಒಟ್ಟು 5602 ಗ್ರಂಥಾಲಯ ಮೇಲ್ವಿಚಾರಕರುಗಳ 2022-23ನೇ ಸಾಲಿನ ಮೊದಲನೇ ತ್ರೈಮಾಸಿಕ ಏಪ್ರಿಲ್-2022 ಮಾಹೆಯ ಗೌರವ ಸಂಭಾವನೆ ಅನುದಾನದ ಮೊತ್ತವನ್ನು ಲೆಕ್ಕ ಶೀರ್ಷಿಕೆ **2205-00-198-1-02-300**ರಡಿ ಒಟ್ಟು **ರೂ.6,72,24,000/- (ಆರು ಕೋಟಿ ಎಪ್ಪತ್ತೆರಡು ಲಕ್ಷದ ಇಪ್ಪತ್ತ್ನಾಲ್ಕು ಸಾವಿರ ರೂಪಾಯಿಗಳು ಮಾತ್ರ**) ಗಳನ್ನು ಅನುಬಂಧ-1ರಲ್ಲಿರುವಂತೆ 5602 ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆಗೊಳಿಸುವಂತೆ ಹಾಗೂ ಬಿಡುಗಡೆ ಮಾಡಿರುವ ಅನುದಾನ ವಿವರವನ್ನು ಖಾತೆ ಸಂಖ್ಯೆ:**64062923099 ರ** ಮೂಲಕ ಆಯಾ ಗ್ರಾಮ ಪಂಚಾಯಿತಿಯ ಶಾಸನಬದ್ಧ ಅನುದಾನದ ಬ್ಯಾಂಕ್ ಖಾತೆಗಳಿಗೆ ಬಿಡುಗಡೆಗೊಳಿಸುವಂತೆ ವ್ಯವಸ್ಥಾಪಕರು, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ವಿಧಾನ ಸೌಧ ಶಾಖೆ, ಬೆಂಗಳೂರು-560 001 ಇವರಿಗೆ ಆದೇಶಿಸಿದೆ.

**ಮೇಲ್ಕಂಡ ಉದ್ದೇಶಗಳಿಗಲ್ಲದೇ ಈ ಅನುದಾನವನ್ನು ಗ್ರಾಮ ಪಂಚಾಯಿತಿಗಳು ಬೇರೆ ಯಾವುದೇ ಉದ್ದೇಶಕ್ಕೂ ವಿನಿಯೋಗಿಸತಕ್ಕದ್ದಲ್ಲ.**

ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ/ ಟಿಎಫ್‌ಪಿ/ 2022, ದಿನಾಂಕ:04.04.2022ರ ರನ್ವಯ ಹೊರಡಿಸಲಾಗಿದೆ.

21-06-22

ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
ಬೆಂಗಳೂರು.

**ಇವರಿಗೆ:**

1. ಮಹಾಲೇಖಪಾಲರು ಕರ್ನಾಟಕ,ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
5. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6. ಮುಖ್ಯ ವ್ಯವಸ್ಥಾಪಕರು, ಭಾರತೀಯ ಸ್ಟೇಟ್ ಬ್ಯಾಂಕ್ ವಿಧಾನಸೌಧ ಶಾಖೆ, ಬೆಂಗಳೂರು.

7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳು.
8. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯ ಎಲ್ಲಾ ತಾಲ್ಲೂಕು ಪಂಚಾಯಿತಿಗಳು (ಆಯಾ ತಾಲ್ಲೂಕು ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ಈ ಆದೇಶದ ಪ್ರತಿಯನ್ನು ತಲುಪಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ).
9. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು.
10. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
11. ಮಾಹಿತಿ ಕೇಂದ್ರ/ವೆಬ್‌ಸೈಟ್, ಗ್ರಾಅಪ ಇಲಾಖೆ.

**ಪ್ರತಿ:**

1. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-6, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
2. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು, ಯೋಜನಾ ಉಸ್ತುವಾರಿ ಮತ್ತು ಮಾಹಿತಿ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
4. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತಕ್ಕೆ.